ಆ)	ಸಿವಿಲ್	ಕ್ರಿಮಿನಲ್
1. ಉಚ್ಚ ನ್ಯಾಯಾಲಯ	1,12,637	2,527
2. ಜಿಲ್ಲಾ ನ್ಯಾಯಾಲಯಗಳು (ನಗರ ಸಿವಿಲ್ ನ್ಯಾಯಾಲಯಗಳನ್ನು ಒಳಗೊಂಡಂತೆ)	1,43,203	19,675
3. ಸಿವಿಲ್ ನ್ಯಾಯಾಧೀಶರ ನ್ಯಾಯಾಲಯಗಳಲ್ಲಿ (ಸಣ್ಣ ವ್ಯಾಜ್ಯಗಳ ನ್ಯಾಯಾಲಯ ಮತ್ತು ಸಿ.ಎಂ.ಎಂ. ನ್ಯಾಯಾಲಯಗಳು ಒಳಗೊಂಡಂತೆ)	1,08,371	95,702
4. ಮುನ್ಸಿಫ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯಗಳು (ಸಂಚಾರಿ ನ್ಯಾಯಾಲಯಗಳನ್ನೊಳಗೊಂಡಂತೆ)	2,43,603	3,94,979
ಒಟ್ಟು	6,07,814	5,12,883

ರಾಜ್ಯದ ನೀರಾವರಿ ಯೋಜನೆಗಳಿಗೆ ವಿಶ್ವ ಬ್ಯಾಂಕಿನ ನೆರವು.

439 (1206): ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ):–

ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ವಿವಿಧ ನೀರಾವರಿ ಯೋಜನೆಗಳಿಗೆ ವಿಶ್ವ ಬ್ಯಾಂಕಿನ ಸಾಲದ ಮೊತ್ತ ಬಾರದಿರುವುದು ನಿಜವೆ;

ಆ) ಹಾಗಿದ್ದಲ್ಲಿ, ಸರ್ಕಾರ ವಿಶ್ವ ಬ್ಯಾಂಕಿನಿಂದ ಈ ಸಾಲದ ಬಿಡುಗಡೆಗೆ ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು):–

ಅ) ರಾಷ್ಟ್ರೀಯ ಜಲ ನಿರ್ವಹಣಾ ಯೋಜನೆಯಡಿಯಲ್ಲಿ ರಾಜ್ಯದ ಕೆಲವು ನೀರಾವರಿ ಯೋಜನೆಗಳಿಗೆ ಮತ್ತು ಕೃಷ್ಣ ಮೇಲ್ದಂಡೆ ಯೋಜನೆಯ ಮೊದಲ ಘಟ್ಟದ ಎರಡನೇ ಹಂತಕ್ಕೆ ವಿಶ್ವ ಬ್ಯಾಂಕ್ ನೆರವು ನೀಡುತ್ತಲಿದೆ. ಕೃಷ್ಣ ಮೇಲ್ದಂಡೆ ಯೋಜನೆಯ ಮೊದಲ ಘಟ್ಟದ ಎರಡನೇ ಹಂತಕ್ಕೆ ಯೋಜನೆಯಿಂದ ನಿರ್ವಸತಿ ಹೊಂದುವ ಜನರ ಪುನರ್ವಸತಿ ಮತ್ತು ಪುನಶ್ಚೇತನ ಕಾರ್ಯಕ್ರಮದ ಅನುಷ್ಠಾನದಲ್ಲಿ ಆದ ವಿಳಂಬದಿಂದಾಗಿ ವಿಶ್ವ ಬ್ಯಾಂಕ್ ನವೆಂಬರ್ 1992ರಿಂದ ತಾತ್ಕಾಲಿಕವಾಗಿ ನೆರವನ್ನು ಸ್ಥಗಿತಗೊಳಿಸಿದೆ.

ಆ) ಕೃಷ್ಣ ಮೇಲ್ದಂಡೆ ಯೋಜನೆಯ ಮೊದಲ ಘಟ್ಟದ ಎರಡನೇ ಹಂತದ ಪುನರ್ವಸತಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ವಿಶ್ವ ಬ್ಯಾಂಕ್‌ನವರ ನಿಬಂಧನೆಗಳೆಲ್ಲವನ್ನು ಈಗಾಗಲೇ ಒಪ್ಪಿಕೊಂಡಿರುವರಿಂದ ಸಧ್ಯದಲ್ಲೇ ನೆರವು ಪುನರಾರಂಭವಾಗುವ ನಿರೀಕ್ಷಣೆಯಿದೆ.

ಕೃಷ್ಣ ಮೇಲ್ದಂಡೆ ಯೋಜನೆಗೆ ವಿಶ್ವಬ್ಯಾಂಕಿನಿಂದ ಬಂದ ನೆರವಿನ ಮೊತ್ತ

440 (1295): ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ):–

ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?